# ಮತ್ತಾಯ 5:1-16

ಆತನು ಆ ಜನರ ಗುಂಪುಗಳನ್ನು ಕಂಡು ಬೆಟ್ಟವನ್ನೇರಿ ಕೂತುಕಂಡ ತರುವಾಯ
ಆತನ ಶಿಷ್ಯರು ಆತನ ಬಳಿಗೆ ಬಂದರು.
ಆತನು ಅವರಿಗೆ ಉಪದೇಶ ಮಾಡಿ ಹೇಳಿದ್ದೇನೆಂದರೆ-
ಆತ್ಮದಲ್ಲಿ ಬಡವರಾಗಿರುವವರು ಧನ್ಯರು; ಪರಲೋಕರಾಜ್ಯವು ಅವರದು.
ದುಃಖಪಡುವವರು ಧನ್ಯರು; ಅವರು ಸಮಾಧಾನ ಹೊಂದುವರು.
ಶಾಂತರು ಧನ್ಯರು; ಅವರು ಭೂಮಿಗೆ ಬಾಧ್ಯರಾಗುವರು
ನೀತಿಗೆ ಹಸಿದು ಬಾಯಾರಿದವರು ಧನ್ಯರು; ಅವರಿಗೆ ತೃಪ್ತಿಯಾಗುವದು
ಕರುಣೆಯುಳ್ಳವರು ಧನ್ಯರು; ಅವರು ಕರುಣೆ ಹೊಂದುವರು.
ನಿರ್ಮಲಚಿತ್ತರು ಧನ್ಯರು; ಅವರು ದೇವರನ್ನು ನೋಡುವರು.
ಸಮಾಧಾನಪಡಿಸುವವರು ಧನ್ಯರು;
ಅವರು ದೇವರ ಮಕ್ಕಳು ಅನ್ನಿಸಿಕೊಳ್ಳುವರು.
ನೀತಿಯ ನಿಮಿತ್ತವಾಗಿ ಹಿಂಸೆಯನ್ನು ತಾಳಿಕೊಳ್ಳುವವರು ಧನ್ಯರು;
ಪರಲೋಕರಾಜ್ಯವು ಅವರದು.
ನನ್ನ ನಿಮಿತ್ತವಾಗಿ ಜನರು ನಿಮ್ಮನ್ನು ನಿಂದಿಸಿ ಹಿಂಸೆಪಡಿಸಿ
ನಿಮ್ಮ ಮೇಲೆ ಕೆಟ್ಟ ಕೆಟ್ಟ ಮಾತುಗಳನ್ನು ಸುಳ್ಳಾಗಿ ಹೊರಿಸಿದರೆ
ನೀವು ಧನ್ಯರು. ಸಂತೋಷಪಡಿರಿ, ಉಲ್ಲಾಸಪಡಿರಿ;
ಪರಲೋಕದಲ್ಲಿ ನಿಮಗೆ ಬಹಳ ಫಲ ಸಿಕ್ಕುವದು;
ನಿಮಗಿಂತ ಮುಂಚೆ ಇದ್ದ ಪ್ರವಾದಿಗಳನ್ನೂ ಹೀಗೆಯೇ ಹಿಂಸೆಪಡಿಸಿದರಲ್ಲಾ.
ನೀವು ಭೂಮಿಗೆ ಉಪ್ಪಾಗಿದ್ದೀರಿ. ಉಪ್ಪು ಸಪ್ಪಗಾದರೆ ಅದಕ್ಕೆ
ಇನ್ನಾತರಿಂದ ಉಪ್ಪಿನ ರುಚಿ ಬಂದಿತು?
ಜನರು ಅದನ್ನು ಹೊರಗೆಹಾಕಿ ತುಳಿಯುವದಕ್ಕೆ ಅದು ಯೋಗ್ಯವೇ ಹೊರತು'
ಮತ್ತಾವ ಕೆಲಸಕ್ಕೂ ಬಾರದು. ನೀವು ಲೋಕಕ್ಕೆ ಬೆಳಕಾಗಿದ್ದೀರಿ.
ಗುಡ್ಡದ ಮೇಲೆ ಕಟ್ಟಿರುವ ಊರು ಮರೆಯಾಗಿರಲಾರದು. ಮತ್ತು
ದೀಪವನ್ನು ಹತ್ತಿಸಿ ಕೊಳಗದೊಳಗೆ ಇಡುವದಿಲ್ಲ; ದೀಪಸ್ತಂಭದ ಮೇಲೆ ಇಡುತ್ತಾರಷ್ಟೆ.
ಆಗ ಅದು ಮನೆಯಲ್ಲಿರುವವರೆಲ್ಲರಿಗೆ ಬೆಳಕುಕೊಡುವದು.
ಅದರಂತೆ ನಿಮ್ಮ ಬೆಳಕು ಜನರ ಮುಂದೆ ಪ್ರಕಾಶಿಸಲಿ.
ಹೀಗಾದರೆ ಅವರು ನಿಮ್ಮ ಒಳ್ಳೇ ಕ್ರಿಯೆಗಳನ್ನು ನೋಡಿ
ಪರಲೋಕದಲ್ಲಿರುವ ನಿಮ್ಮ ತಂದೆಯನ್ನು ಕೊಂಡಾಡುವರು